**ದಿನಾಂಕಃ 24-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಸಿ ಬಿ ಕೆ ವಕೀಲರಿಂದಃ**

ಗಾಯದ ಪ್ರಮಾಣ ಪತ್ರವನ್ನು ನಿ ಪಿ -16 ಎಂದು, ಡಿಸ್ಚಾರ್ಜ ಸಮ್ಮರಿಯನ್ನು ನಿ ಪಿ -17 ಎಂದು, ಮೆಡಿಕಲ್ ಬಿಲ್ಲನ್ನು ನಿ ಪಿ -18 ಎಂದು, ಒಪಿಡಿ ಕಾರ್ಡನ್ನು ನಿ ಪಿ -19 ಎಂದು,ಅಂಗನ್ಯೂನತ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ 20 ಎಂದು, ಎರಡು ಎಕ್ಸರೆ ಪಿಲಂ/ ಕ್ಷ-ಕಿರಣ ಫಿಲಂ ನ್ನು ಒಟ್ಟಾಗಿ ಕೊಟ್ಟಿದ್ದು ಅದನ್ನು ನಿ ಪಿ 21 ಎಂದು, ಗುರುತಿಸಲಾಯಿತು.

ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ ಕಾರ್ಡ ಬ್ಯಾಂಕ್ ಪಾಸ್ ಬುಕ್ ಮೂಲ ದಾಖಲೆಗಳ ಜೊತೆ ಅವುಗಳ ನೋಟರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಗಳ ಜೊತೆ ಪರಿಶೀಲಿಸಿದ ನಂತರ ಸದರಿ ದಾಖಲೆಗಳು ದಿನ ಬಳಕೆಗೆ ಬೇಕಾಗಿರುವುದರಿಂದ ಅವುಗಳ ನೋಟರಿ ಪ್ರತಿಗಳನ್ನು ನಿ ಪಿ-22 ರಿಂದ ನಿ ಪಿ-24 ಎಂದು ಗುರುತಿಸಲಾಯಿತು. ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನಕಾರ್ಡ, ಬ್ಯಾಂಕ್ ಪಾಸ್ ಬುಕ್ ಗಳನ್ನು ಅರ್ಜಿದಾರರಿಗೆ ಹಿಂದುರಿಗಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಪಿ ಕೆ ವಕೀಲರಿಂದಃ**

ಮೆಗ್ಗಾನ ಆಸ್ಪತ್ರೆ ಮತ್ತು ಶಿಕಾರಿಪುರ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ನೀಡುತ್ತಾರೆ ಎಂದರೆ ನಿಜ. ಬಿ ಪಿ ಎಲ್ ಕಾರ್ಡ ಇರುವವರಿಗೆ ಉಚಿತವಾಗಿ ಚಿಕಿತ್ಸೆ ಕೊಡುತ್ತಾರೆ ಎಂದರೆ ನಿಜ. ಆದರೆ ನನಗೆ ಬಿ ಪಿ ಎಲ್ ಕಾರ್ಡ ಇರುವುದಿಲ್ಲ. ನಾನು ಕೂಲಿ ಕೆಲಸ ಮಾಡುತ್ತಿದ್ದೇನೆ. ಅಪಘಾತದಿಂದ ನನಗೆ ಬೆನ್ನು ಮತ್ತು ಎಡ ಬುಜಕ್ಕೆ ಗಾಯವಾಗಿರುತ್ತದೆ. ಸದರಿ ಗಾಯಗಳಿಗೆ ನಾನು ಶಸ್ತ್ರ ಚಿಕಿತ್ಸೆ ಪಡೆದಿಲ್ಲ. ನಾನು ಎಸ್ ಎಸ್ ಆಸ್ಪತ್ರೆಯಲ್ಲಿ ನಾನು ಹೊರರೋಗಿಯಾಗಿ ಮುಂದುವರೆದ ಚಿಕಿತ್ಸೆ ಪಡೆದಿರುತ್ತೇನೆ. ಇನ್ನು ನಾನು ಸಂಪೂರ್ಣ ಗುಣಮುಖನಾಗಿಲ್ಲ. ನಾನು ಸಂಪೂರ್ಣವಾಗಿ ಗುಣಮುಖನಾಗಿದ್ದರೂ ಸಹ ಪರಿಹಾರಕ್ಕೋಸ್ಕರ ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರ ಹಾಜುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಶಿಕಾರಿಪುರ ಆಸ್ಪತ್ರೆಯಿಂದ ಗಾಯದ ಪ್ರಮಾಣಪತ್ರವನ್ನು ಹಾಜರುಪಡಿಸಿಸಲು ತೊಂದರೆ ಇರುತ್ತದೆ. ಈಗ ನನಗೆ 53 ವರ್ಷ ಆಗಿದೆ.

ಅಘಾತವಾದಾಗ ನನಗೆ 52 ಆಗಿರುತ್ತದೆ. ನನಗೆ ಅಂಗನ್ಯೂನತೆ ಉಂಟಾಗಿಲ್ಲ ಎಂದರೆ ಸರಿಯಲ್ಲ. ಆದರೂ ಸಹ ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಸುಳ್ಳು ದಾಖಲೆಗಳನ್ನು ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಆಧಾಯವನ್ನು ತೋರಿಸಲು ಯಾವ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/–

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.